ಇತ್ಯಾದಿ) ನಿಯಮಗಳು, 2006ರ ನಿಯಮ 4ರಲ್ಲಿ ನಿಗದಿಪಡಿಸಿರುವ ಮಾನದಂಡವನ್ನು ಅನುಸರಿಸಲಾಗುವುದು.

ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗಳಿಗೆ ಮರುಪರೀಕ್ಷೆ

794 (787) ಶ್ರೀ ರಾಮಲಿಂಗಾರೆಡ್ಡಿ (ಬಿ.ಟಿ.ಎಂ. ಲೇಔಟ್) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ ಆಗಸ್ಟ್ ತಿಂಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಭಿವೃದ್ಧಿ ಅಧಿಕಾರಿಗಳ ಹುದ್ದೆಗೆ ಪರೀಕ್ಷೆಯನ್ನು ನಡೆಸಲಾಗಿತ್ತೇ;

ಆ) ಈ ಪರೀಕ್ಷೆಗೆ ಕುಳಿತ ಅಭ್ಯರ್ಥಿಗಳ ಸಂಖ್ಯೆ ಎಷ್ಟು;

ಇ) ಈ ಪರೀಕ್ಷೆಯ ಪ್ರಶ್ನೆ ಪತ್ರಿಕೆಯನ್ನು ತಯಾರಿಸಲು ಖಾಸಗಿ ಸಂಸ್ಥೆಗೆ ನೀಡಿದ್ದು ನಿಜವಲ್ಲವೇ;

ಈ) ಹಾಗಿದ್ದಲ್ಲಿ, ಕಾರಣಗಳೇನು;

ಉ) ಈ ಪರೀಕ್ಷೆಯಲ್ಲಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಬಂದಿದ್ದಲ್ಲಿ, ಈ ಪರೀಕ್ಷೆಯನ್ನು ರದ್ದುಗೊಳಿಸಿ, ಕೆ.ಪಿ.ಎಸ್.ಸಿ. ಯಿಂದ ನಡೆಸಲಾಗುತ್ತದೆಯೇ?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್, ಸಚಿವರು) :

ಅ) ದಿನಾಂಕ: 20-09-2009 ರಂದು ಸ್ಪರ್ಧಾತ್ಮಕ ಪರೀಕ್ಷೆ ನಡೆಸಲಾಗಿತ್ತು.

ಆ) 1.68 ಲಕ್ಷ.

ಇ) ಸ್ಪರ್ಧಾತ್ಮಕ ಪರೀಕ್ಷೆ ನಡೆಸಲು ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ ಮೆಂಟ್ ಸಂಸ್ಥೆಗೆ ವಹಿಸಲಾಗಿತ್ತು. ಇದು ಖಾಸಗಿ ಸಂಸ್ಥೆಯಾಗಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಇಲ್ಲ.

ಊ) ಉದ್ಭವಿಸುವುದಿಲ್ಲ.